# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 22ನೇ ಮಾರ್ಚ್, 2016**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

## 03. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಸದಸ್ಯರುಗಳಾದ: ಕೋಟ ಶ್ರೀನಿವಾಸ ಪೂಜಾರಿ, ಗೋ.ಮಧುಸೂದನ್, ಅರುಣ ಶಹಾಪೂರ, ರಘುನಾಥರಾವ್ ಮಲ್ಕಾಪುರೆ, ಸೋಮಣ್ಣ ಮ. ಬೇವಿನಮರದ ಹಾಗೂ ಎಸ್.ವ್ಹಿ. ಸಂಕನೂರ** ಅವರುಗಳು ಮೈಸೂರು ನಗರದ ಕ್ಯಾತಮಾರನಹಳ್ಳಿಯ ಸಾಮಾಜಿಕ ಕಾರ್ಯಕರ್ತರಾದ ಶ್ರೀ ರಾಜು, ಇವರ ಬರ್ಬರ ಕೊಲೆ ಕುರಿತು ನೀಡಿರುವ ಸೂಚನೆಗೆ ಸರ್ಕಾರದಿಂದ ಉತ್ತರ.

## 04. ವಿತ್ತೀಯ ಕಾರ್ಯಕಲಾಪ

2016–2017ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

## ೦5. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು ಸರ್ಕಾರಿ ಅನುದಾನಿತ ಪ್ರೌಢಶಾಲೆಗಳಲ್ಲಿ ಅನುಮತಿ ನೀಡುವ ರೀತ್ಯಾ ರಾಜ್ಯದ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಳೆದ ೨ ವರ್ಷಗಳಿಂದ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಬಡ್ತಿಯಿಂದ ತೆರವಾದ ಹುದ್ದೆಗಳನ್ನು ದಿನಾಂಕ: 31.12.2012ರವರೆಗೆ ಭರ್ತಿಗೊಳಿಸಲು ಅನುಮತಿ ನೀಡುವ ಮೂಲಕ ಪದವಿ ಕಾಲೇಜಿನಲ್ಲಿ ಕುಸಿಯುತ್ತಿರುವ ಶೈಕ್ಷಣಿಕ ಗುಣಮಟ್ಟ ಕಾಪಾಡುವ ಕುರಿತು **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಕೆ.ಸಿ.ಕೊಂಡಯ್ಯ** ಅವರು ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದಕ್ಕೆ ವಿನಾಯಿತಿ ನೀಡುವ ಕುರಿತು **ಮಾನ್ಯ ಸಾರಿಗೆ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಎಂ.ಕೆ.ಪ್ರಾಣೇಶ್** ಅವರು ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನ ಕಳಸಾ ಹೋಬಳಿ, ನೆಲ್ಲಿಬಿಡು ಮತ್ತು ಕಳಸಾ ಪಟ್ಟಣದ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯು ಅರ್ಧಕ್ಕೆ ಸ್ಥಗಿತಗೊಂಡಿರುವ ಕುರಿತು **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

## ೦6. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** ಅವರು ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಶಿವಯೋಗ ಮಂದಿರದಲ್ಲಿ ಜವಾರಿ ಆಕಳುಗಳ ಗೋಮೂತ್ರದಿಂದ **"ಅರ್ಕ"** ತಯಾರಿಸುವ ಚಿಕ್ಕ ಉದ್ದಿಮೆಯನ್ನು ಸ್ಥಾಪಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಣ್ಣ ಕೈಗಾರಿಕೆ ಸಚಿವರು)**

**ಆ) ಶ್ರೀ ಡಿ.ಎಸ್.ವೀರಯ್ಯ** ಅವರು ರಾಜ್ಯದಲ್ಲಿ 2015ನೇ ಸಾಲಿನ "ಜೀತ ಪದ್ಧತಿ ಪರಿಶೀಲನಾ ಸಮಿತಿ"ಯ ವರದಿಯನ್ನು ಪರಾಮರ್ಶಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

**ವಿ. ಶ್ರೀಶ್**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**